ಬೆಂಗಳೂರು ನಗರದಲ್ಲಿ ನೀರಿನ ಹಳೆಯ ಪೈಪ್‌ಗಳ ಬದಲಾವಣೆ

840 - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ನೀರಿನ ಹಳೆ ಪೈಪುಗಳನ್ನು ಬದಲಾಯಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು) :

ಅ) 80 ಕಿ.ಮೀ. ನಷ್ಟು ಹಳೆಯ ಕೊಳವೆಗಳನ್ನು ಬದಲಾಯಿಸಿ ಹೊಸ ಕೊಳವೆ ಮಾರ್ಗವನ್ನು 3 ವರ್ಷಗಳ ಅವಧಿಯಲ್ಲಿ ಹಂತ ಹಂತವಾಗಿ ಕೈಗೊಳ್ಳಲು ಸರ್ಕಾರದ ಅನುಮೋದನೆಯನ್ನು ನೀಡಿದೆ.

ಶಿವಾಜಿನಗರ ಕ್ಷೇತ್ರದಲ್ಲಿ ಪಡಿತರ ಚೀಟಗಳ ವಿತರಣೆ

842 - ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ನೀಡಿರುವ ಒಟ್ಟು ಪಡಿತರ ಚೀಟಿಗಳ ಸಂಖ್ಯೆ ಎಷ್ಟು? (ಎಲ್ಲಾ ಬಗೆಯ ಪಡಿತರ ಚೀಟಿಗಳೂ ಸೇರಿ)*
2. *ಈ ಕ್ಷೇತ್ರದಲ್ಲಿ ಪಡಿತರ ಚೀಟಿಗಳು ಇಲ್ಲದವರ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ?*
3. *ಈ ಕ್ಷೇತ್ರದಲ್ಲಿ ಆಹಾರ ಇಲಾಖೆಯ ಸಿಬ್ಬಂದಿ ಸಂಚರಿಸಿ ಪಡಿತರ ಚೀಟಿ ಇಲ್ಲದವರಿಗೆ ಸ್ಥಳದಲ್ಲಿಯೇ ಪಡಿತರ ಚೀಟಿಗಳನ್ನು ನೀಡುವ ಕಾರ್ಯಕ್ರಮವನ್ನು ಸರ್ಕಾರ ಹಮ್ಮಿಕೊಳ್ಳುತ್ತದೆಯೇ?*

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :

1)

ಹಸಿರು ಪಡಿತರ ಚೀಟಿಗಳು	ಪೋಟೋ ಪ.ಚೀ.ಗಳು	ಒಟ್ಟು ಪ.ಚೀ.ಗಳು
1342	16898	18240

2. ಯಾವ ಸಮೀಕ್ಷೆಯನ್ನು ನಡೆಸಿರುವುದಿಲ್ಲ.

3. ಇಲ್ಲ.